**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ**

**ಕೆ.ಆರ್.ನಗರ**

**ಸಿ.ಸಿ. 1575/2019**

**ಪಿಡಬ್ಲೂ-5**

**ಸಿಡಬ್ಲೂ-6**

| | | |
|---|---|---|
| ಸಾಕ್ಷಿದಾರರ ಹೆಸರು | - | ಜಗದೀಶ |
| ತಂದೆಯ ಹೆಸರು | - | ಬೋಜೇಗೌಡ |
| ವಯಸ್ಸು | - | 55 ವರ್ಷ |
| ಕೆಲಸ | - | ವ್ಯವಸಾಯ |
| ವಾಸ | - | ,ಕೆ ಆರ್ ನಗರ |

**ದಿನಾಂಕ 22-07-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಎಪಿಪಿಯವರಿಂದ**

ಚಾಸಾ 1 ಮತ್ತು 5 ನನಗೆ ಗೊತ್ತಿಲ್ಲ. ಸಾಕ್ಷಿಗೆ ತೋರಿಸಿದ ದಾಖಲೆಯಲ್ಲಿ ತನ್ನ ಸಹಿ ಇರುವುದನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯು ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ನಿಪಿ 2 ಕ್ಕೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದು ನಿಪಿ 2 ರ ವಿವರವು ಗೊತ್ತಿರುವುದಿಲ್ಲ. ನನ್ನ ಜೊತೆ ನಿಪಿ 2 ಕ್ಕೆ ಬೇರೆ ಯಾರೋ ಸಹಿ ಮಾಡಿದ್ದಾರೋ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಘಟನಾ ಸ್ಥಳದಲ್ಲಿ ಪಂಚನಾಮೆ ಮಾಡಿರುವುದಿಲ್ಲ.

ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದರಿಂದ ಅನುಮತಿ ನೀಡಲಾಯಿತು.

**<u>ಪಾಟೀ ಸವಾಲು ಮಾನ್ಯ ಎಪಿಪಿಯವರಿಂದಃ</u>**

ದಿಃ 08.04.2018 ರಂದು ಕೆ ಆರ್  ನಗರ ಟೌನಿನ ಕುವೆಂಪು ಬಡಾವಣೆಯ ನಿವಾಸಿ ಚಾಸಾ-1 ರವರ ವಾಸದ ಮನೆಯಲ್ಲಿ. ಚಾಸಾ-1 ರವರು ನಾನು ಹಾಗೂ ಎಮ್ ಬಿ ನಾಗರಾಜು ಹಾಜರಿದ್ದು, ಚಾಸಾ-1 ರವರು ತೋರಿಸಿಕೊಟ್ಟ ಘಟನಾ ಸ್ಥಳದಲ್ಲಿ ನಿಪಿ 2 ರಂತೆ ಪಂಚನಾಮೆಯನ್ನು ಸಂಜೆ 05.00 ಗಂಟೆಯಿಂದ 6.00 ಗಂಟೆಯವರೆಗೆ ವಿಚಾರವಾಗಿ ಬರೆದು ಅದೇ  ಸ್ಥಳದಲ್ಲಿ ನನ್ನ ಹಾಗೂ ಚಾಸಾ-1 ಮತ್ತು 4 ರವರ ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ , ಆರೋಪಿತರು ಪರಿಚಯಸ್ಥರಾದ ಕಾರಣ ಅವರಿಗೆ ಸಹಾಯ ಮಾಡಲು ಪ್ರಕರಣದ ಪಂಚನಾಮೆಯ ಬಗ್ಗೆ ಸಂಪೂರ್ಣ  ಮಾಹಿತಿ ಇದ್ದರೂ ಸಹ ಈ ದಿನ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ</u> - ಇರುವುದಿಲ್ಲ

**(ನನ್ನ ಉಕ್ತ ಲೇಖನದ ಮೇರೆಗೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

ಓ ಹೇ ಕೇ ಸ ಇದೆ ಎಂ

**(ಚಂದನ್ ಎಸ್ )**
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮತ್ತು ಪ್ರದನ್ಯಾದಂ., ಕೆ.ಆರ್.ನಗರ